ಇಲಾಖೆ / ವಿಷಯ: DEPARTMENT / SUBJECT: ವಿಧಾನ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ಸಂಯುಕ್ತ ಕರ್ನಾಟಕ     ದಿನಾಂಕ : DATE : 24/07/2019

# ಅತೃಪ್ತರ ಅನರ್ಹತೆ ಸ್ಪೀಕರ್ ತೀರ್ಪು ಬಾಕಿ

ಸಂ.ಕ. 24-7-19

ರಾಜೀನಾಮೆ ನೀಡಿರುವ ಅತೃಪ್ತ ಶಾಸಕರನ್ನು ಅನರ್ಹಗೊಳಿಸುವ ಬಗ್ಗೆ ತಮ್ಮ ತೀರ್ಪು ಕಾಯ್ದಿರಿಸಿರುವುದಾಗಿ ಸಭಾಧ್ಯಕ್ಷ ರಮೇಶಕುಮಾರ್ ತಿಳಿಸಿದ್ದಾರೆ. ರಾಜೀನಾಮೆ ನೀಡಿರುವ ಶಾಸಕರ ಪರ ವಿಚಾರಣೆಗೆ ಹಾಜರಾಗಿದ್ದ ಹಿರಿಯ ವಕೀಲ ಹಾಗೂ ಮಾಜಿ ಅಡ್ವೋಕೇಟ್ ಜನರಲ್ ಅಶೋಕ್ ಹಾರನಹಳ್ಳಿ ಶಾಸಕರನ್ನು ಅನರ್ಹಗೊಳಿಸಲು ಬರುವುದಿಲ್ಲ. ಪ್ರಕರಣವು ಈಗಾಗಲೇ ಸುಪ್ರೀಂಕೋರ್ಟ್ ಮೆಟ್ಟಿಲೇರಿದೆ. ಅಲ್ಲದೆಯೇ ರಾಜೀನಾಮೆ ನೀಡಿರುವ ಎಲ್ಲ ಶಾಸಕರು ವಿಚಾರಣೆ ಎದುರಿಸಲು ಸಜ್ಜಾಗಿದ್ದಾರೆ. ರಾಜೀನಾಮೆ ನೀಡಿರುವ ಎಲ್ಲ ಶಾಸಕರು ನಿಮ್ಮ ಎದುರಿಗೆ ಬಂದು ಹಾಜರಾಗಲಿದ್ದಾರೆ. ಈ ಬಗ್ಗೆ ಆಕ್ಷೇಪಣೆಯನ್ನು ಸಲ್ಲಿಸಬೇಕಾಗಿದೆ. ಹೀಗಾಗಿ ನಾಲ್ಕು ವಾರಗಳ ಕಾಲಾವಕಾಶ ನೀಡುವಂತೆ ಕೋರಿದರು. ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಪರವಾಗಿ ವಿಎಸ್ ಉಗ್ರಪ್ಪ ಮತ್ತು ಶಶಿಕಿರಣ್ ಶೆಟ್ಟಿ ಆಗಮಿಸಿ ವಾದ ಮಂಡಿಸಿದರು. ಶಾಸಕರು ವಿಪ್ ಪಾಲಿಸಿಲ್ಲ. ಅಲ್ಲದೆಯೇ ಬಿಜೆಪಿ ಜೊತೆ ಗುರುತಿಸಿಕೊಂಡಿರುವ ಬಗ್ಗೆ ದಾಖಲೆಗಳಿವೆ. ಹೀಗಾಗಿ ಪಕ್ಷಾಂತರ ನಿಷೇಧ ಕಾಯ್ದೆ ಅನ್ವಯ ಅನರ್ಹಗೊಳಿಸಬೇಕು.

ಶಾಸಕರಾದ ರಮೇಶ್ ಜಾರಕಿಹೊಳಿ, ಮಹೇಶ್ ಕುಮಟಳ್ಳಿ, ಪ್ರತಾಪ್‌ಗೌಡ ಪಾಟೀಲ್, ಆನಂದ್‌ಸಿಂಗ್, ಬಿ.ಸಿ.ಪಾಟೀಲ್, ಶಿವರಾಮ್ ಹೆಬ್ಬಾರ್, ಎಸ್.ಟಿ.ಸೋಮಶೇಖರ್, ಬೈರತಿ ಬಸವರಾಜು, ಮುನಿರತ್ನ, ರೋಷನ್ ಬೇಗ್, ಎಂ.ಟಿ.ಬಿ.ನಾಗರಾಜ್, ಡಾ.ಸುಧಾಕರ್, ಶ್ರೀಮಂತ್ ಪಾಟೀಲ್ ಪಕ್ಷ ವಿರೋಧಿ ಚಟುವಟಿಕೆ ನಡೆಸಿರುವ ಬಗ್ಗೆ ಸ್ಪಷ್ಟ ದಾಖಲೆಗಳಿದ್ದು ಇದೇ ಹಿನ್ನೆಲೆಯಲ್ಲಿ ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ಸಿದ್ದರಾಮಯ್ಯ ಮತ್ತು ಕೆಪಿಸಿಸಿ ಅಧ್ಯಕ್ಷ ದಿನೇಶ್ ಗುಂಡೂರಾವ್ ದೂರು ನೀಡಿದ್ದಾರೆ. ಅದನ್ನು ಪರಿಗಣಿಸಿ ಅನರ್ಹಗೊಳಿಸುವಂತೆ ವಾದ ಮಂಡಿಸಿದರು. ಜೆಡಿಎಸ್ ಪರವೂ ವಕೀಲರು ವಾದ ಮಂಡಿಸಿ ಸಂವಿಧಾನದ 110ನೇ ಪರಿಚ್ಛೇಧದ ಸೆಕ್ಷನ್ 164(2) ನಿಯಮವು ಶಾಸಕರ ಅನರ್ಹತೆಗೆ ಅವಕಾಶ ಕಲ್ಪಿಸಿದೆ. ಅದರನ್ವಯ ಅನರ್ಹಗೊಳಿಸುವಂತೆ ಕೋರಿದರು.

ಎರಡು ಬದಿಯ ವಾದ ಆಲಿಸಿದ ಸಭಾಧ್ಯಕ್ಷ ರಮೇಶಕುಮಾರ್ ಅವರಿದ್ದ ಪೀಠವು ತಮ್ಮ ತೀರ್ಪು ಕಾಯ್ದಿರಿಸಿದ್ದಾಗಿ ಸೂಚಿಸಿ ವಿಚಾರಣೆ ಮುಂದೂಡಿದ್ದಾರೆ.